ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಕಾಲ್ಪನಿಕ ವೇತನ ಬಡ್ತಿ ನೀಡುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):-

487 (710) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾಲ್ಪನಿಕ ವೇತನ ಬಡ್ತಿ ನೀಡುವ ಕಾರ್ಯ ಯಾವ ಹಂತದಲ್ಲಿದೆ; ಈ ಕುರಿತು ಅಗತ್ಯ ದಾಖಲೆಗಳನ್ನು ಶಿಕ್ಷಕ/ಉಪನ್ಯಾಸಕರಿಂದ ಮಾಹಿತಿಯನ್ನು ಪಡೆಯಲಾಗುತ್ತಿದೆಯೇ; ಪಡೆಯುತ್ತಿದ್ದಲ್ಲಿ, ಯಾವ ಯಾವ ಮಾಹಿತಿಗಳನ್ನು ಪಡೆಯಲಾಗುತ್ತಿದೆ; (ಮಾಹಿತಿ ನೀಡುವುದು)

(ಆ) ಈ ಮಾಹಿತಿಗಳು ಸರ್ಕಾರದಲ್ಲಿ ಇಲಾಖೆಯಲ್ಲಿ ಲಭ್ಯವಿಲ್ಲವೇ; ಯಾವ ಕಾಲಮಿತಿಯ ಒಳಗೆ ಈ ಕಾಲ್ಪನಿಕ ವೇತನ ಬಡ್ತಿ ನೀಡುವ ಸಮಸ್ಯೆಯನ್ನು ಸರ್ಕಾರ ಬಗೆಹರಿಸಲು ಮುಂದಾಗುವುದು ?